****

ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಮಾಡುವ ಪೂರ್ವದಲ್ಲಿ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರ ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಾರದಿರುವುದರಿಂದ ಜನಪ್ರತಿನಿಧಿಗಳು ತಮ್ಮ ಕ್ಷೇತ್ರದ ಕೆಲಸಕಾರ್ಯಗಳ ಬಗ್ಗೆ ಸಲಹೆ ಸೂಚನೆ ನೀಡಲು ಸಾಧ್ಯವಾಗದಂತಾಗಿದೆ. ಅಲ್ಲದೆ ಕ್ಷೇತ್ರಗಳಲ್ಲಿ ಆಗಬೇಕಾದ ಕೆಲಸ ಕಾರ್ಯಗಳ ಬಗ್ಗೆ ಹಾಗೂ ಕ್ಷೇತ್ರದ ಅಗತ್ಯತೆಗಳ ಕುರಿತು ಸಾರ್ವಜನಿಕರು ಸಂಬಂಧಿಸಿದ ಕ್ಷೇತ್ರದ ಮಾನ್ಯ ಸಂಸದರು ಮತ್ತು ಮಾನ್ಯ ಶಾಸಕರುಗಳ ಗಮನಕ್ಕೆ ತರುವುದರಿಂದ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಮ್ಮ ಪ್ರವಾಸ ಕಾರ್ಯಕ್ರಮ ಸೂಚಿಯನ್ನು ಪ್ರವಾಸ ಮಾಡುವ ಪೂರ್ವದಲ್ಲೇ ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರುಗಳಿಗೆ ಕಳುಹಿಸಿದರೆ, ಅಧಿಕಾರಿಗಳು ಪ್ರವಾಸ ಮಾಡುವ ದಿನದಂದು ಸನ್ಮಾನ್ಯ ಸದಸ್ಯರುಗಳು ಸಹ ಸದರಿ ಸಭೆಗಳಲ್ಲಿ ಹಾಜರಿದ್ದು, ಪ್ರಗತಿ ಪರಿಶೀಲನೆ ಕೈಗೊಳ್ಳಲು ಅನುಕೂಲವಾಗುವುದು ಹಾಗೂ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ಮತ್ತು ಸಾರ್ವಜನಿಕರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಹಾಯಕವಾಗುತ್ತದೆ.

ಆದುದರಿಂದ ಇನ್ನು ಮುಂದೆ ಜಿಲ್ಲಾ ಮಟ್ಟದ ಮತ್ತು ಉಪ ವಿಭಾಗ ಮಟ್ಟದ ಅಧಿಕಾರಿಗಳು ತಾಲ್ಲೂಕು ಮಟ್ಟದಲ್ಲಿ ಇಲಾಖೆಯ ಪ್ರಗತಿ ಪರಿಶೀಲನೆ ಮಾಡಲು ಮತ್ತು ವಿವಿಧ ಉದ್ದೇಶಗಳಿಗಾಗಿ ಅಧಿಕೃತ ಪ್ರವಾಸ ಕೈಗೊಳ್ಳುವ ಅಧಿಕಾರಿಗಳು ಪ್ರವಾಸ ಮಾಡುವ ಪೂರ್ವದಲ್ಲಿ ತಮ್ಮ ಪ್ರವಾಸ ಕಾರ್ಯಕ್ರಮದ ಸೂಚಿಯನ್ನು ಸಂಬಂಧಪಟ್ಟ ಕ್ಷೇತ್ರದ ಮಾನ್ಯ ಸಂಸತ್ ಸದಸ್ಯರು ಮತ್ತು ವಿಧಾನ ಮಂಡಲದ ಮಾನ್ಯ ಸದಸ್ಯರ ಗಮನಕ್ಕೆ ತಪ್ಪದೇ ತರಬೇಕೆಂದು ಈ ಮೂಲಕ ಸೂಚಿಸಲಾಗಿದೆ.

: ಕರ್ನಾಟಕ ವಿಧಾನಸಭೆ :–

485 ಶ್ರೀ ಶಿವಶಂಕರರೆಡ್ಡಿ ಎನ್.ಹೆಚ್. (ಗೌರಿಬಿದನೂರು)

ಮುಖ್ಯಮಂತ್ರಿಯವರು

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಣಿಗಾರಿಕೆ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ ಯಾವ ಭಾಗದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿವೆ (ವಿವರ ಒದಗಿಸುವುದು)

ಹೌದು. ಸರ್ಕಾರದ ಗಮನಕ್ಕೆ ಬಂದಿದೆ.

ಚಿಕ್ಕ ಹೊಸಹಳ್ಳಿ, ಮಂಚೇನಹಳ್ಳಿ, ಚರಕಮಟ್ಟನಹಳ್ಳಿ, ಪೋತೇನಹಳ್ಳಿ, ವೀರಗೊಲ್ಲಹಳ್ಳಿ, ಕಾದಲವೇಣಿ, ಚಿಕ್ಕ–ಕುರುಗೋಡು, ವೆಲಪಿ, ನಗರಗೆರೆ, ಡಿಪಾಳ್ಯ,

ಪೂಜಾರ್ಲಹಳ್ಳಿ ಮತ್ತು ಕಾಮಗಾನಹಳ್ಳಿ ಗ್ರಾಮಗಳ ಸಮೀಪ ಅನಧಿಕೃತ ಮರಳು ಗಣಿಗಾರಿಕೆ ನಡೆಯುತ್ತಿರುವುದು ಕಂಡುಬಂದಿರುತ್ತದೆ.

ಆ) ಈ ಅಕ್ರಮ ಗಣಿಗಾರಿಕೆ ವಿರುದ್ಧ ಸರ್ಕಾರವು ಕೈಗೊಳ್ಳುವ ಕ್ರಮವೇನು;

2008–09ನೇ ಸಾಲಿನಲ್ಲಿ ಈ ಪ್ರದೇಶಗಳಲ್ಲಿ ಅಕ್ರಮ ಮರಳು ಸಾಗಾಣಿಕೆಯಲ್ಲಿ ತೊಡಗಿದ್ದ 54 ವಾಹನಗಳನ್ನು ಹಿಡಿದು, ರೂ.1.53 ಲಕ್ಷಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿದ್ದು, 23 ವಾಹನಗಳ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆ ದಾಖಲಿಸಲಾಗಿದೆ. 2009–10ನೇ ಸಾಲಿನಲ್ಲಿ 42 ವಾಹನಗಳನ್ನು ಹಿಡಿದು, ರೂ.4.74 ಲಕ್ಷಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಲಾಗಿದೆ.

ಜಿಲ್ಲಾಧಿಕಾರಿಯವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಉಸ್ತುವಾರಿ ಸಮಿತಿಯು ಆಗಿಂದಾಗ್ಗೆ ಸಭೆಗಳನ್ನು ನಡೆಸುತ್ತಿದ್ದು, ಅಕ್ರಮ ಮರಳು ಗಣಿಗಾರಿಕೆಯನ್ನು ತಡೆಗಟ್ಟಲು ಆಯ್ದ ಸ್ಥಳಗಳಲ್ಲಿ ತಾತ್ಕಾಲಿಕ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಿ, ಕಂದಾಯ, ಪೋಲೀಸ್, ಅರಣ್ಯ ಹಾಗೂ ಇತರೇ ಇಲಾಖೆಗಳ ಸಿಬ್ಬಂದಿಸೇವೆಯನ್ನು ಬಳಸಿಕೊಂಡು ಕೇಂದ್ರ ಕಛೇರಿಯ ತನಿಖಾ ದಳಗಳ ಸಹಯೋಗದೊಂದಿಗೆ ತಾಲ್ಲೂಕಿನಲ್ಲಿ ಅನಧಿಕೃತ ಮರಳು ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.

ಇ) ಈ ತಾಲ್ಲೂಕಿನಲ್ಲಿ ಈಗಲೂ ಸಹ ಅಕ್ರಮವಾಗಿ ಮರಳು ಸಾಗಾಣಿಕೆ ನಡೆಯುತ್ತಿದ್ದು, ಇವರ ಮೇಲೆ ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಕೈಗೊಳ್ಳುವ ಕ್ರಮವೇನು?

ಮರಳು ಸಾಗಾಣಿಕೆಗಾಗಿ ತಾತ್ಕಾಲಿಕ ಪರವಾನಗಿ ಪದ್ಧತಿಯನ್ನು ಜಾರಿಗೊಳಿಸಿದ್ದು, ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಸದಸ್ಯರ ಸಹಕಾರದೊಂದಿಗೆ ಅನಧಿಕೃತ ಮರಳು ಗಣಿಗಾರಿಕೆ/ಸಾಗಾಣಿಕೆಯನ್ನು ತಡೆಗಟ್ಟಲು ನಿಯಮಾನುಸಾರ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ. ಆದಾಗ್ಯೂ, ಅಧಿಕಾರಿಗಳು ತಪ್ಪೆಸಗಿರುವುದು ಕಂಡುಬಂದಲ್ಲಿ, ಅವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲಾಗುವುದು.